# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 232 (232) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ತಿಪ್ಪಣ್ಣಪ್ಪ ಕಮಕನೂರ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ<br>ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 12.08.2025 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕಲ್ಯಾಣ ಕರ್ನಾಟಕ ಭಾಗದಲ್ಲಿ ಬಹುರಾಷ್ಟ್ರೀಯ ಕಂಪನಿಗಳು, ಪ್ರಮುಖ ಕೈಗಾರಿಕೆಗಳು ಬಂಡವಾಳ ಹೂಡುವುದನ್ನು ಆಕರ್ಷಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | ಕಲ್ಯಾಣ ಕರ್ನಾಟಕ ಭಾಗವೂ ಸೇರಿದಂತೆ, ರಾಜ್ಯದಲ್ಲಿ ಕೈಗಾರಿಕೆಗಳ ಸ್ಥಾಪನೆಗಾಗಿ ಸರ್ಕಾರವು ಕೆಳಕಂಡ ಆದ್ಯತಾ/ ಪ್ರೋತ್ಸಾಹಕ ಕ್ರಮಗಳನ್ನು ಕೈಗೊಳ್ಳಲಾಗಿದೆ;<br>➢ ಕಾಲಕಾಲಕ್ಕೆ ವಿಶ್ವಬಂಡವಾಳ ಹೂಡಿಕೆದಾರರ (ಇನ್ವೆಸ್ಟ್ ಕರ್ನಾಟಕ) ಸಮಾವೇಶಗಳನ್ನು ಆಯೋಜಿಲಾಗುತ್ತಿದೆ.<br>➢ ಕೈಗಾರಿಕೆಗಳನ್ನು ಸ್ಥಾಪಿಸುವವರಿಗೆ ಸಹಾಯಧನ ಮತ್ತು ರಿಯಾಯಿತಿಗಳನ್ನು ನೀಡುವ ಬಗ್ಗೆ, ಕೈಗಾರಿಕಾ ನೀತಿ 2025-30 ನ್ನು ಹೊರತರಲಾಗಿದೆ. ಕೈಗಾರಿಕಾ ಬೆಳವಣಿಗೆಯನ್ನು ಆಧರಿಸಿ ಕೈಗಾರಿಕೆಗಳಿಗೆ ಹೆಚ್ಚಿನ ಪ್ರೋತ್ಸಾಹವನ್ನು ನೀಡಲಾಗುತ್ತಿದೆ.<br>➢ ದೇಶ ವಿದೇಶಗಳ ಹಲವಾರು ಪ್ರತಿಷ್ಠಿತ ಕಂಪನಿಗಳೊಂದಿಗೆ ಕರ್ನಾಟಕದಲ್ಲಿ ಬಂಡವಾಳ ಹೂಡಲು ಸರಣಿ ಸಭೆಗಳನ್ನು ನಡೆಸಲಾಗುತ್ತಿದೆ ಮತ್ತು ಯೋಜನೆಗಳ ಶೀಘ್ರ ಅನುಷ್ಠಾನಕ್ಕಾಗಿ ಅನುಸರಣೆ ಮಾಡಲಾಗುತ್ತಿದೆ.<br>➢ ಕೈಗಾರಿಕೆಗಳನ್ನು ಪ್ರಾರಂಭಿಸಲು ಬೇಕಾಗಿರುವ ಭೂಮಿ ಖರೀದಿ ಪ್ರಕ್ರಿಯೆ ಸರಳೀಕರಣಗೊಳಿಸಲಾಗಿದೆ.<br>➢ ಕೈಗಾರಿಕೆಗಳನ್ನು ಪ್ರಾರಂಭಿಸಲು ಬೇಕಾಗಿರುವ ಕೆಲವು ಮುಖ್ಯ ಎನ್.ಒ.ಸಿ/ಒಪ್ಪಿಗೆಗಳನ್ನು ಸ್ವಯಂ ಘೋಷಣ ಪತ್ರದ ಆಧಾರದ ಮೇಲೆ ಪಡೆಯಲು ಮತ್ತು 3 ವರ್ಷಗಳವರೆಗೆ ವಿಸ್ತರಿಸಿ ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) ಅಧಿನಿಯಮ 2002ಕ್ಕೆ ತಿದ್ದುಪಡಿ ತರಲಾಗಿದೆ. |
| ಆ | ಈವರೆಗೆ ಯಾವ ಯಾವ ಉದ್ಯಮಗಳು ಈ ಭಾಗದಲ್ಲಿ ನೆಲೆಯೂರಿವೆ ಮತ್ತು ಎಷ್ಟು ಮೊತ್ತದ ಬಂಡವಾಳವನ್ನು ಹೂಡಿವೆ; | ಕಲ್ಯಾಣ ಕರ್ನಾಟಕ ಜಿಲ್ಲೆಗಳಾದ ಬೀದರ್, ಕಲಬುರ್ಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಕಳೆದ 2013-14ನೇ ಸಾಲಿನಿಂದ ಪ್ರಸ್ತುತದವರೆಗೆ (2025ನೇ ಸಾಲಿನ ಜುಲೈ ಮಾಹೆಯ ಅಂತ್ಯದವರೆಗೆ) ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ ಹಾಗೂ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿಗಳಲ್ಲಿ ಒಟ್ಟು 422 ಯೋಜನೆಗಳಿಗೆ ಅನುಮೋದನೆ ನೀಡಲಾಗಿದ್ದು, ಇವುಗಳಿಂದ ರೂ.2,25,342 ಕೋಟಿ ಮೊತ್ತದ ಬಂಡವಾಳ ಹೂಡಿಕೆ ಮತ್ತು1,30,395 ಉದ್ಯೋಗಾವಕಾಶಗಳನ್ನು ನಿರೀಕ್ಷಿಸಲಾಗಿದೆ. |

| | | |
|---|---|---|
| | | ಇವುಗಳ ಪೈಕಿ 95 ಯೋಜನೆಗಳು ಅನುಷ್ಠಾನಗೊಂಡಿದ್ದು, ಇವುಗಳಿಂದ ರೂ.76416 ಕೋಟಿ ಮೊತ್ತದ ಬಂಡವಾಳ ಹೂಡಿಕೆಯಾಗಿದೆ ಹಾಗೂ 52,748 ಸಂಖ್ಯೆಯ ಉದ್ಯೋಗ ಸೃಜನೆಯಾಗಿದೆ. |
| ಇ | ಸರ್ಕಾರ ಇವರಿಗೆ ನೀಡಿರುವ ಸವಲತ್ತುಗಳೇನು; | ಕೈಗಾರಿಕಾ ನೀತಿಯನ್ವಯ ಲಭ್ಯವಿರುವ ರಿಯಾಯಿತಿ ಹಾಗೂ ಪ್ರೋತ್ಸಾಹಕಗಳನ್ನು ನೀಡಲಾಗಿದೆ/ನೀಡಲಾಗುತ್ತಿದೆ. |
| ಈ | ಈ ಉದ್ಯಮಗಳಿಂದ ಉದ್ಯೋಗದ ಸೃಷ್ಟಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ಕೈಗಾರಿಕಾ ನೀತಿ 2025-30 ರಡಿ ಪ್ರೋತ್ಸಾಹಕ ಮತ್ತು ಉತ್ತೇಜನಗಳನ್ನು ಪಡೆಯಲು ಗ್ರೂಪ್-ಡಿ ವೃಂದದ ನೇಮಕಾತಿಯಲ್ಲಿ ಶೇ. 100 ರಷ್ಟು ಒಟ್ಟಾರೆ ಶೇ. 70 ರಷ್ಟು ಉದ್ಯೋಗಾವಕಾಶಗಳನ್ನು ಸ್ಥಳೀಯರಿಗೆ ನೀಡಬೇಕೆಂಬ ಷರತ್ತನ್ನು ವಿಧಿಸಲಾಗಿರುತ್ತದೆ. |

ಕಡತ ಸಂಖ್ಯೆ ಸಿಐ 244 ಎಸ್‌ಪಿಐ 2025

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು